ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:10/7:ಆರ್‌ಆರ್‌ಸಿ:2015.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:5-3-2015.

**ಸುತ್ತೋಲೆ**

ವಿಷಯ : PMGSY ಅಡಿಯಲ್ಲಿ ಸ್ವೀಕೃತವಾಗುವ ಅನುದಾನವನ್ನು ಪರಿಣಾಮಕಾರಿಯಾಗಿ ಬಳಸಲು ಕೆಲವು ಜಿಲ್ಲಾ ಮುಖ್ಯ ರಸ್ತೆಗಳನ್ನು ಕೆಳದರ್ಜೆಗೆ ತರುವ ಬಗ್ಗೆ.

ಉಲ್ಲೇಖ:
1. 2009-10ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ 6ನೇ ವರದಿಯಲ್ಲಿನ ಶಿಫಾರಸ್ಸು.
2. ಲೋಕೋಪಯೋಗಿ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಲೋಇ/136/ಐಎಫ್‌ಎ/2013, ದಿ:24-1-2015.

ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದಂತೆ, 2009-10ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ 6ನೇ ವರದಿಯಲ್ಲಿ PMGSY ಅಡಿಯಲ್ಲಿ ಸ್ವೀಕೃತವಾಗುವ ಅನುದಾನವನ್ನು ಪರಿಣಾಮಕಾರಿಯಾಗಿ ಬಳಸಲು ಕೆಲವು ಜಿಲ್ಲಾ ಮುಖ್ಯ ರಸ್ತೆಗಳನ್ನು ಕೆಳದರ್ಜೆಗೆ ತರುವ ಬಗ್ಗೆ ಕೆಳಕಂಡಂತೆ ಶಿಫಾರಸ್ಸು ಮಾಡಿರುವುದಾಗಿ ಉಲ್ಲೇಖ-2ರ ಲೋಕೋಪಯೋಗಿ ಇಲಾಖೆಯ ಪತ್ರದಲ್ಲಿ ವರದಿಯಾಗಿರುತ್ತದೆ.

> **PMGSY ಯೋಜನೆಯಡಿಯಲ್ಲಿ ಸ್ವೀಕೃತವಾಗುವ ಅನುದಾನವನ್ನು ಪರಿಣಾಮಕಾರಿಯಾಗಿ ಬಳಸಲು ಈಗಾಗಲೇ ಜಿಲ್ಲಾ ಮುಖ್ಯ ರಸ್ತೆಗಳಾಗಿರುವ ಕೆಲವು ರಸ್ತೆಗಳನ್ನು ಕೆಳದರ್ಜೆಗೇರಿಸುವ ಪ್ರಸ್ತಾವನೆಯನ್ನು ಪರಿಗಣಿಸಬೇಕೆಂದು ಸಮಿತಿಯು ಶಿಫಾರಸ್ಸು ಮಾಡುತ್ತದೆ.**

ಆದುದರಿಂದ PMGSY ಯೋಜನೆಯಡಿಯಲ್ಲಿ ಸ್ವೀಕೃತವಾಗುವ ಅನುದಾನವನ್ನು ಪರಿಣಾಮಕಾರಿಯಾಗಿ ಬಳಸಲು ಈಗಾಗಲೇ ಜಿಲ್ಲಾ ಮುಖ್ಯ ರಸ್ತೆಗಳಾಗಿರುವ ಕೆಲವು ರಸ್ತೆಗಳನ್ನು ಕೆಳದರ್ಜೆಗೇರಿಸುವ ಪ್ರಸ್ತಾವನೆಗಳನ್ನು ಪರಿಗಣಿಸುವ ಬಗ್ಗೆ ಕ್ರಮ ವಹಿಸಿ, ತೆಗೆದುಕೊಂಡ ಕ್ರಮದ ಬಗ್ಗೆ ಅನುಸರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಹಾಗೂ ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ಈ ಮೂಲಕ ನಿರ್ದೇಶಿಸಲಾಗಿದೆ.

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ :**

1. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.

2. ಎಲ್ಲಾ ಜಿಲ್ಲಾ ಪಂಚಾಯತಿಗಳ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
4. ಸರ್ಕಾರದ ಕಾರ್ಯದರ್ಶಿಗಳು, ಸಾರ್ವಜನಿಕ ಲೆಕ್ಕಪತ್ರ ಸಮಿತಿ, ಕರ್ನಾಟಕ ವಿಧಾನ ಸಭೆಯ ಸಚಿವಾಲಯ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಚೇರಿಯ ಅಧೀಕ್ಷಕ ಇಂಜಿನಿಯರುಗಳು.
8. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ / ಪಿಎಂಜಿಎಸ್‌ವೈ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳು.